Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

23.08.2024 18.40 hrs

## ಮುಖ್ಯಾಂಶಗಳು

<><*<><>*><>

- ಕಾನೂನಿನ ಪ್ರಕಾರವೇ ಜಿಂದಾಲ್ ಕಂಪನಿಗೆ ಜಮೀನು - ಬೃಹತ್, ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್
- ರಾಜ್ಯದಲ್ಲಿ ಮಂಕಿ ಪಾಕ್ಸ್ ಆತಂಕ ಬೇಡ - ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್
- ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ: ಬೆಂಗಳೂರಿನ ನೆಹರು ತಾರಾಲಯದಲ್ಲಿ ವಿಶೇಷ ಕಾರ್ಯಕ್ರಮ
- ಗಣೇಶೋತ್ಸವ ಆಚರಣೆ; ವಲಯ ಮಟ್ಟದಲ್ಲಿ ಸಿದ್ಧತೆಗೆ ಬಿಬಿಎಂಪಿ ಕ್ರಮ

<><*<><>*><>

ನ್ಯಾಯಾಲಯದ ನಿರ್ದೇಶನ ಮತ್ತು ಅದನ್ನು ಅನುಸರಿಸಿ ಹೊರಡಿಸಿದ ಸರಕಾರಿ ಆದೇಶ ಹಾಗೂ ಸಂಪುಟ ಸಭೆಯ ನಿರ್ಣಯದಂತೆಯೇ ಕಾನೂನಿನ ಅನುಸಾರವಾಗಿ ೩ ಸಾವಿರದ ೬೭೭ ಎಕರೆ ಭೂಮಿಯನ್ನು ಜಿಂದಾಲ್ ಉಕ್ಕು ಕಂಪನಿಗೆ ಮಾರಾಟ ಮಾಡಲಾಗುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆಯಲ್ಲಿ ಕಾರ್ಖಾನೆ ಹೊಂದಿರುವ ಜಿಂದಾಲ್ ಕಂಪನಿಗೆ ರಿಯಾಯಿತಿ ನೀಡಿಲ್ಲ. ಮಾರುಕಟ್ಟೆ ಮೌಲ್ಯ ಅನುಸಾರ ಬೆಲೆ ನಿಗದಿಪಡಿಸಲಾಗಿದೆ. ಕಂಪನಿ ಕೂಡ ಸರಕಾರದ ಷರತ್ತುಗಳನ್ನು ಪಾಲಿಸಿದೆ ಎಂದರು. ಇನ್ನು ಆರು ತಿಂಗಳಲ್ಲಿ ರಾಜ್ಯದಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆಯಲಿದೆ. ಜಿಂದಾಲ್ ರಾಜ್ಯದಲ್ಲಿ ೯೦ ಸಾವಿರ ಕೋಟಿ ರೂಪಾಯಿ ಹೂಡಿದ್ದು, ೫೦ ಸಾವಿರ ಉದ್ಯೋಗಾವಕಾಶ ಕಲ್ಪಿಸಿದೆ. ಇಂತಹ ಸಂದರ್ಭದಲ್ಲಿ ಸರಕಾರದ ಕಡೆಯಿಂದ ಹೂಡಿಕೆದಾರರಿಗೆ ತಪ್ಪು ಸಂದೇಶ ಹೋಗಬಾರದು ಎಂದು ಎಂ.ಬಿ.ಪಾಟೀಲ್ ಹೇಳಿದರು. ಈ ಹಿಂದೆ ನಾವು ಜಿಂದಾಲ್ ವಿರುದ್ಧವೇನೂ ಪ್ರತಿಭಟಿಸಿರಲಿಲ್ಲ. ಆಗ ತಮ್ಮ ಪಕ್ಷ ಜನಾರ್ದನ ರೆಡ್ಡಿ ವಿರುದ್ಧವಷ್ಟೇ ದನಿ ಎತ್ತಿತ್ತು. ಅಲ್ಲದೇ, ಈಗ ಜಿಂದಾಲ್‌ಗೆ ನೀಡುತ್ತಿರುವ ಭೂಮಿಯಲ್ಲಿ ಗಣಿಗಾರಿಕೆ ನಡೆಯುತ್ತಿರಲಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

<><*<><>*><>

ಆಫ್ರಿಕಾ ಖಂಡದಲ್ಲಿ ಮಂಕಿ ಪಾಕ್ಸ್ ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸಿದೆ. ಆದರೂ, ಈ ಸೋಂಕು ಭಾರತದಲ್ಲಿ ಹರಡುವ ಅಪಾಯ ಕಡಿಮೆ. ಹೀಗಾಗಿ ಯಾರೊಬ್ಬರು ಆತಂಕಕ್ಕೆ ಒಳಗಾಗಬಾರದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದ್ದಾರೆ. ವಿಕಾಸಸೌಧದಲ್ಲಿಂದು ವೈದ್ಯಕೀಯ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ಮಂಕಿ ಪಾಕ್ಸ್ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಭೆ ನಡೆಸಿ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಸೋಂಕನ್ನು ಎದುರಿಸಲು ರಾಜ್ಯ ಸರ್ಕಾರ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ-ಎನ್‌ಸಿಡಿಸಿ ಇದರ ಹರಡುವಿಕೆ ಅಪಾಯದ ಮೌಲ್ಯಮಾಪನ ನಡೆಸುತ್ತಿದೆ. ಒಂದು ವೇಳೆ ಪ್ರಕರಣಗಳಿದ್ದರೆ ತಕ್ಷಣವೇ ಎಚ್ಚರಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಸೋಂಕು ಪರೀಕ್ಷಿಸುವ ಸೌಲಭ್ಯವಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಆಸ್ಪತ್ರೆಯಲ್ಲಿ ೫೦ ಹಾಸಿಗೆಗಳ ಹಾಗೂ ೫ ಐಸಿಯು ಘಟಕಗಳ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಸಚಿವರು ಹೇಳಿದರು.

<><*<><>*><>

ಭಾರತ ಚಂದ್ರನ ದಕ್ಷಿಣ ಧ್ರುವಕ್ಕೆ ಉಪಗ್ರಹ ಇಳಿಸಿದ ಸಾಧನೆಯನ್ನು ಗುರುತಿಸಿ ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಿಸುತ್ತಿದ್ದೇವೆ. ದಕ್ಷಿಣ ಧ್ರುವ ತಲುಪಿದ ಮೊದಲ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಪಾತ್ರವಾದ ದಿನಾಚರಣೆ ಇದಾಗಿದ್ದು, ಇದನ್ನು ವಿಜೃಂಭಣೆಯಿಂದ ಆಚರಿಸುತ್ತಿದ್ದೇವೆ. ಇಂದಿನ ದಿನ ನಮ್ಮ ಯಶಸ್ಸನ್ನು ಸಂಭ್ರಮಿಸುವ ಜೊತೆಗೆ ಮುಂದೆ ಸಾಧಿಸಬೇಕಾದ ಕಾರ್ಯಗಳನ್ನು ಅಲೋಚನೆಯ ಜೊತೆಗೆ ಯುವ ಪೀಳಿಗೆಯನ್ನು ಪ್ರೋತ್ಸಾಹಿಸಲು ನಾವು ಈ ದಿನವನ್ನು ಬಳಸಬೇಕಿದೆ ಎಂದು ಇಸ್ರೋದ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್ ಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಜವಹಾರ್‌ಲಾಲ್ ನೆಹರು ತಾರಾಲಯದಲ್ಲಿ ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನದ ಪ್ರಯುಕ್ತ ಆಯೋಜಿಸಲಾಗಿದ್ದ ವಿವಿಧ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು. ಯುವಪೀಳಿಗೆ ಪ್ರಶ್ನೆ ಕೇಳುವ ಮನೋಭಾವ ಬೆಳೆಸಿಕೊಳ್ಳಬೇಕು. ಅವರಲ್ಲಿ ಹುದುಗಿರುವ ವಿಜ್ಞಾನಿಯನ್ನು ಜೀವಂತವಾಗಿ ಉಳಿಸಿಕೊಳ್ಳಬೇಕು. ಪ್ರಶ್ನೆಯ ಉತ್ತರ ಪಡೆಯುವ ಜಿಜ್ಞಾಸೆ ಬೆಳೆಸಿಕೊಳ್ಳಬೇಕು. ಖ್ಯಾತ ವಿಜ್ಞಾನಿ ಮೇಡಂ ಕ್ಯೂರಿ ಮತ್ತು ಭಾರತದವರೇ ಆದ ಸರ್ ಸಿ.ವಿ.ರಾಮನ್ ಅವರಂತೆ ಪ್ರಶ್ನೆಗಳ ಅನ್ವೇಕ್ಷಣೆಯಲ್ಲಿ ತೊಡಗಿದ ಅವರು, ತಾವೇ ಉತ್ತರ ಕಂಡುಹಿಡಿದರು ಎಂದರು. ಇಸ್ರೋ ಸಂಸ್ಥೆ, ಚಂದ್ರಯಾನ-೧ ಉಪಗ್ರಹವನ್ನು ಚಂದ್ರನತ್ತ ರವಾನಿಸಿ, ನೀರಿನ ಅಂಶವನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಯಿತು. ಆದರೆ ಚಂದ್ರಯಾನ-೨, ವೈಫಲ್ಯದಿಂದ ಧೃತಿಗೆಡದೇ ಚಂದ್ರಯಾನ-೩ ಅನ್ನು ಯಶಸ್ವಿಯಾಗಿ ಕಕ್ಷೆಗೆ ತಲುಪಿಸಿ, ಚಂದ್ರನ ಮೇಲ್ಮೈ ಮೇಲೆ ಇಳಿಸುವಲ್ಲಿ ಯಶಸ್ವಿಯಾಯಿತು. ಎ.ಪಿ.ಜೆ.ಅಬ್ದುಲ್ ಕಲಾಂ ಅವರು ಹೇಳಿದಂತೆ ಪ್ರತಿಯೊಂದು ವೈಫಲ್ಯದಿಂದ ಪಾಠ ಕಲಿತು, ಯಶಸ್ಸಿನತ್ತ ನಮ್ಮ ಸತತ ಪ್ರಯಾಣ ಮುಂದುವರೆದರೆ, ಯಶಸ್ಸು ನಮ್ಮದಾಗುತ್ತದೆ ಎಂದು ಎ.ಎಸ್.ಕಿರಣ್ ಕುಮಾರ್ ಹೇಳಿದರು.

<><*<><>*><>

ರಾಷ್ಟ್ರೀಯ ಬಾಹ್ಯಾಕಾಶ ದಿನದ ಅಂಗವಾಗಿ ಇದೇ ೨೫ರವರೆಗೆ ಮಂಗಳೂರಿನ ಪಾಂಡೇಶ್ವರದ ನೆಕ್ಸಸ್ ಮಾಲ್‌ನಲ್ಲಿ ಬಾಹ್ಯಾಕಾಶ ಸಂಬಂಧಿತ 'ಆಸ್ಟ್ರೋ ಕಿಡ್ಸ್' ಎಂಬ ವಿಶೇಷ ಪ್ರದರ್ಶನವನ್ನು ಆಯೋಜಿಸಲಾಗಿದೆ. ಈ ಪ್ರದರ್ಶನದಲ್ಲಿ ಇಸ್ರೋ ತಯಾರಿಸಿದ ಬಾಹ್ಯಾಕಾಶ ರಾಕೆಟ್‌ಗಳು ಮತ್ತು ಉಪಗ್ರಹಗಳ ಮಾದರಿಯನ್ನು ಸಾರ್ವಜನಿಕರಿಗಾಗಿ ಪ್ರದರ್ಶನಕ್ಕೆ ಇಡಲಾಗಿದೆ. ಕಾರ್ಯಕ್ರಮವನ್ನು ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ, ಇಸ್ರೋ ಉಪನಿರ್ದೇಶಕ ಸತೀಶ್ ಮಿಶ್ರಾ, ಮಕ್ಕಳಲ್ಲಿ ವೈಜ್ಞಾನಿಕ ಪ್ರಜ್ಞೆ ಮೂಡಿಸುವ ಇಂತಹ ಕಾರ್ಯಕ್ರಮಗಳು ಭಾರತದ ಅಂತರಿಕ್ಷ ವಿಜ್ಞಾನವನ್ನು ಮತ್ತಷ್ಟು ಮುಂದೆ ಸಾಗಲು ಪ್ರೇರಣೆ ನೀಡಲಿದೆ ಎಂದು ಹೇಳಿದರು.

<><*<><>*><>

ತುಮಕೂರು ಜಿಲ್ಲೆಯಲ್ಲಿ ನಡೆದಿರುವ ಜಲಜೀವನ್ ಮಿಷನ್ ಕಾಮಗಾರಿಗಳ ಗುಣಮಟ್ಟ ಪರಿಶೀಲನೆಗೆ ವಿಶೇಷ ತಂಡವನ್ನು ರಚಿಸಲಾಗುವುದು ಎಂದು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದರು. ತುಮಕೂರಿನಲ್ಲಿಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ೧೧ ವಿಧಾನಸಭಾ ಕ್ಷೇತ್ರಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಲು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಜಲಶಕ್ತಿ ಮಿಷನ್ ಕೇಂದ್ರ ಅಧಿಕಾರಿಗಳು ಹಾಗೂ ಸ್ಥಳೀಯ ಅಧಿಕಾರಿಗಳ ತಂಡವನ್ನು ರಚಿಸುವಂತೆ ಸೂಚಿಸಿದರು. ಜಲಶಕ್ತಿ ಮಿಷನ್‌ನಲ್ಲಿ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಬೇಕೆಂಬುದು ಕೇಂದ್ರ ಸರ್ಕಾರದ ಧ್ಯೇಯವಾಗಿದ್ದು, ಫ್ಲೋರೈಡ್‌ಯುಕ್ತ ನೀರನ್ನು ಪೂರೈಕೆ ಮಾಡುವುದನ್ನು ನಿಲ್ಲಿಸಬೇಕು. ಕೇಂದ್ರ ಸರ್ಕಾರ ಕೊಳವೆಬಾವಿ ಕೊರೆದು ನೀರು ಪೂರೈಸಲು ಸೂಚಿಸಿಲ್ಲ ಎಂದರು. ಬಹುಗ್ರಾಮ ಕುಡಿಯುವ ನೀರು ಯೋಜನೆಯ ಕಾಮಗಾರಿಯನ್ನು ಸೂಕ್ತ ರೀತಿಯಲ್ಲಿ ಕೈಗೊಳ್ಳಲಾಗುತ್ತಿಲ್ಲ. ಯೋಜನೆಗೆ ನೂರಾರು ಕೋಟಿ ಖರ್ಚು ಮಾಡಲಾಗಿದೆ. ಆದರೆ ನೀರು ಪೂರೈಕೆ ಮಾಡಲಾತ್ತಿಲ್ಲ. ಈ ಬಗ್ಗೆ ತನಿಖೆ ನಡೆಸಬೇಕೆಂದು ಇದೇ ವೇಳೆ ತುಮಕೂರು ಗ್ರಾಮಾಂತರ ಶಾಸಕ ಸುರೇಶ್ ಗೌಡ ಮನವಿ ಮಾಡಿದರು. ಸಭೆಯಲ್ಲಿ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಶಾಸಕರಾದ ಎಂ.ಟಿ.ಕೃಷ್ಣಪ್ಪ, ಜ್ಯೋತಿಗಣೇಶ್, ಚಿದಾನಂದಗೌಡ, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಜಿಲ್ಲಾ ಪಂಪಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಭು, ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಗಣೇಶೋತ್ಸವ ಆಚರಣೆಗಾಗಿ ಆಯಾ ವಲಯ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಗಣೇಶ ಚತುರ್ಥಿ ಆಚರಣೆ ಸಂಬಂಧ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಗಣೇಶ ಪ್ರತಿಷ್ಠಾಪನೆಗಾಗಿ ಅನುಮತಿ ನೀಡಲು ೬೩ ಉಪವಿಭಾಗ ಕಚೇರಿಗಳಲ್ಲಿ ಏಕಗವಾಕ್ಷಿ ಕೇಂದ್ರಗಳನ್ನು ತೆರದು, ಪಾಲಿಕೆ, ಪೊಲೀಸ್, ಬೆಸ್ಕಾಂ ಹಾಗೂ ಅಗ್ನಿಶಾಮಕ ಅಧಿಕಾರಿಗಳನ್ನು ತ್ವರಿತವಾಗಿ ನಿಯೋಜಿಸಬೇಕು. ಅನುಮತಿ ಕೋರಿ ಬರುವವರಿಗೆ ಕಾಲಮಿತಿಯೊಳಗಾಗಿ ಅನುಮತಿ ಸಿಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ ಎಂದರು. ಕೆರೆಗಳ ಬಳಿಯಿರುವ ಕಲ್ಯಾಣಿಗಳನ್ನು ಸಂಪೂರ್ಣ ಸ್ವಚ್ಛಗೊಳಿಸಬೇಕು, ಗಣೇಶ ವಿಸರ್ಜನೆಗಾಗಿ ಅಗತ್ಯ ಸಿಬ್ಬಂದಿಯನ್ನು ನಿಯೋಜನೆ ಮಾಡುವುದರ ಜೊತೆಗೆ ಬ್ಯಾರಿಕೇಡಿಂಗ್, ಸಿಸಿ-ಟಿವಿ, ವಿದ್ಯುತ್-ದ್ವೀಪ, ನುರಿತ ಈಜುಗಾರರ ವ್ಯವಸ್ಥೆ, ಕ್ರೇನ್ ಗಳ ಸೌಲಭ್ಯವನ್ನು ಕಲ್ಪಿಸಬೇಕೆಂದು ಸೂಚಿಸಿದರು. ಗಣೇಶ ವಿಸರ್ಜನೆ ಮಾಡುವ ಕಲ್ಯಾಣಿಗಳ ಬಳಿ ಆಂಬುಲೆನ್ಸ್ ಗಳ ವ್ಯವಸ್ಥೆ, ಪ್ರಥಮ ಚಿಕಿತ್ಸೆ ನೀಡಲು ಆರೋಗ್ಯ ಸಿಬ್ಬಂದಿ ನಿಯೋಜನೆ, ಜೊತೆಗೆ ಮುಂಜಾಗ್ರತಾ ಕ್ರಮವಾಗಿ ಅಗ್ನಿಶಾಮಕ ವಾಹನಗಳ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತರು ಸೂಚಿಸಿದರು.

<><*<><>*><>

ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಸಾಮಾಜಿಕ ಅರಣ್ಯ ಇಲಾಖೆಯ ಸಹಕಾರದಿಂದ ಆಯೋಜಿಸಲಾದ ಏಕ್ ಪೇಡ್ ಮಾ ಕೆ ನಾಮ್" ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಜಿಲ್ಲೆಯಲ್ಲಿ ಪ್ರತಿಯೊಬ್ಬರು ಮಾತೆಯ ಹೆಸರಲ್ಲಿ ಒಂದು ಸಸಿ ನೆಡುವ ಮೂಲಕ ಪ್ರಕೃತಿಯನ್ನು ಉಳಿಸುವಂತೆ ಅವರು ಕರೆ ನೀಡಿದರು. ವಿಶ್ವ ಪರಿಸರ ದಿನದ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಾಯಿಯ ಹೆಸರಲ್ಲಿ ಒಂದು ವೃಕ್ಷ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಅದರಂತೆ ರಾಷ್ಟ್ರ ಮಟ್ಟದಲ್ಲಿ ನರೇಗಾ ಯೋಜನೆಯಡಿ ಅರಣ್ಯ ಇಲಾಖೆಯ ಸಹಭಾಗಿತ್ವದೊಂದಿಗೆ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ಇಲಾಖೆಯಡಿ ೨೦೨೪-೨೫ ನೇ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.

<><*<><>*><>

ಹವಾವರ್ತಾಮಾನ...

ನೈಋತ್ಯ ಮುಂಗಾರು ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ದುರ್ಬಲವಾಗಿತ್ತು ಹಾಗೂ ಉತ್ತರ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ರಾಜ್ಯದ ಕರಾವಳಿ ಹಾಗೂ ಉತ್ತರ ಒಳನಾಡಿನ ಬಹುತೇಕ ಕಡೆಗಳಲ್ಲಿ ಮತ್ತು ದಕ್ಷಿಣ ಒಳನಾಡಿನ ಕೆಲವು ಪ್ರದೇಶಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಕಲಬುರಗಿ ಜಿಲ್ಲೆಯ ಚಿಂಚೋಳಿಯಲ್ಲಿ ೭ ಸೆಂಟಿಮೀಟರ್ ಮಳೆಯಾಗಿದೆ. ಉಳಿದಂತೆ ಕೊಟ್ಟಿಗೆಹಾರ ೫, ಸೇಡಂ ೪, ಕದ್ರಾ ೩, ಕ್ಯಾಸಲ್‌ರಾಕ್, ಮಂಕಿ, ಸಿದ್ದಾಪುರ, ಕುಮಟಾ, ಯಲ್ಲಾಪುರ, ಲಿಂಗಸೂಗೂರು, ಶಹಪುರ, ಚಿತ್ತಾಪುರ ಮತ್ತು ಜೇವರ್ಗಿಯಲ್ಲಿ ತಲಾ ೨ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಕಲಬುರಗಿ, ಯಾದಗರಿ, ರಾಯಚೂರು, ಕೊಪ್ಪಳ ಮತ್ತು ಉತ್ತರಕನ್ನಡ ಜಿಲ್ಲೆಗಳ ಹಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಕರ್ನಾಟಕ ಹಾಗೂ ಉತ್ತರ ಒಳನಾಡಿನ ಕೆಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮುಂದಿನ ೨೪ ಗಂಟೆಗಳು ಸಾಮಾನ್ಯವಾಗಿ ಮೋಡಕವಿದ ಆಕಾಶವಿದ್ದು, ಸಾಧಾರಣ ಮಳೆಯಾಗುವ ಸಾಧ್ಯತೆ. ಗರಿಷ್ಠ ತಾಪಮಾನ ೩೦ ಹಾಗೂ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಮುಡಾ ಅಕ್ರಮದಲ್ಲಿ ಸಚಿವ ಭೈರತಿ ಸುರೇಶ್ ಪ್ರಮುಖ ರೂವಾರಿಯಾಗಿದ್ದಾರೆ. ಅವರು ಮುಡಾ ಸಭೆ ನಡೆಸಿ ೫೦:೫೦ ಅನುಪಾತದಲ್ಲಿ ನಿವೇಶನ ಹಂಚಿಕೆ ವಾಪಾಸ್ ಪಡೆಯುತ್ತೇನೆ ಎಂದು ಹೇಳಿದ್ದರು. ಆದರೆ ಇದುವರೆಗೂ ಯಾವುದೇ ನಿವೇಶನ ವಾಪಸ್ ಪಡೆಯಲಿಲ್ಲ ಎಂದು ಬಿಜೆಪಿ ಒಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಆರೋಪಿಸಿದ್ದಾರೆ.

೨.	ಯಾದಗಿರಿ ಜಿಲ್ಲೆಯಾದ್ಯಂತ ಬೆಳೆ ಸಮೀಕ್ಷೆ ಮೊಬೈಲ್ ಆಪ್ ಮೂಲಕ ನಡೆಯುತ್ತಿದ್ದು, ರೈತರು ತಮ್ಮ ಮೊಬೈಲ್‌ನಲ್ಲಿ ಬೆಳೆ ದರ್ಶಕ ಆಪ್ ಡೌನ್‌ಲೋಡ್ ಮಾಡಿಕೊಂಡು, ತಮ್ಮ ಜಮೀನುಗಳ ಸಮೀಕ್ಷೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

೩.	ವಿಜಯಪುರ ಜಿಲ್ಲೆಯ ಆಲಮಟ್ಟಿ ಜವಾಹರ್ ನವೋದಯ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳ ಕುರಿತು ಪರಿಶೀಲನೆ ನಡೆಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

೪.	ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸಹಾಯ-ಸೌಲಭ್ಯ ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುವಂತೆ ಅಧಿಕಾರಿಗಳಿಗೆ ಕರ್ನಾಟಕ ಉಪ ಲೋಕಾಯುಕ್ತರಾದ ಕೆ.ಎನ್.ಫಣೀಂದ್ರ ಹೇಳಿದರು. ವಿಜಯಪುರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾ ನ್ಯಾಯಾಂಗ ಘಟಕ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಅಧಿಕಾರಿಗಳಿಗಳಿಗೆ ಹಮ್ಮಿಕೊಂಡ ಲೋಕಾಯುಕ್ತ ಕಾಯ್ದೆಯ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>